ಪರಿಶಿಷ್ಟ ಜಾತಿ:ಪರಿಶಿಷ್ಟ ವರ್ಗಗಳ ವಿದ್ಯಾರ್ಥಿ ನಿಲಯಗಳ ಸಂಖ್ಯೆ

532 - ಶ್ರೀ ಹೆಚ್. ಎಸ್. ಶಂಕರಲಿಂಗೇಗೌಡ (ಚಾಮರಾಜ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು.

ಆ) ಮೈಸೂರಿನಲ್ಲಿ ಎಷ್ಟಿವೆ?

ಇ) ಏರುತ್ತಿರುವ ಜನಸಂಖ್ಯೆಗನುಗುಣವಾಗಿ ಮೈಸೂರಿಗೆ ಮತ್ತೊಂದು ವಿದ್ಯಾರ್ಥಿನಿಲಯವನ್ನು ಮಂಜೂರು ಮಾಡಲಾಗುವುದೇ;

ಈ) ಬರುವ ಶೈಕ್ಷಣಿಕ ವರ್ಷದಲ್ಲೇ ಮಂಜೂರು ಮಾಡಲಾಗುವುದೆ?

ಶ್ರೀ ರಮೇಶ್ ಸಿ. ಜಿಗಜಿಣಗಿ (ಸಮಾಜ ಕಲ್ಯಾಣ ಸಚಿವರು) :

ಅ) ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ವಿದ್ಯಾರ್ಥಿಗಳಿಗಾಗಿ ನಡೆಸುತ್ತಿರುವ ವಿದ್ಯಾರ್ಥಿ ನಿಲಯಗಳ ವಿವರ ಕೆಳಕಂಡಂತಿದೆ :

1.	ಸರ್ಕಾರಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳು	-	950
2.	ಸರ್ಕಾರಿ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳು	-	147
3.	ಅನುದಾನಿತ ಮೆಟ್ರಿಕ್‌ಪೂರ್ವ ವಿದ್ಯಾರ್ಥಿನಿಲಯಗಳು	-	295
4.	ಮಾನ್ಯತೆ ಪಡೆದ ಖಾಸಗಿ ಕಾಲೇಜು ವಿದ್ಯಾರ್ಥಿನಿಲಯಗಳು	-	74
	ಒಟ್ಟು	**-**	**1466**

ಆ) ಮೈಸೂರು ನಗರದಲ್ಲಿ 4 ಸರ್ಕಾರಿ ಹಾಗೂ 6 ಅನುದಾನಿತ ವಿದ್ಯಾರ್ಥಿನಿಲಯಗಳಿವೆ.

ಇ) ಪ್ರಸಕ್ತ ಸಾಲಿನಲ್ಲಿ ಮೈಸೂರು ನಗರಕ್ಕೆ ಅನುಸರಿಸಿ ಮುಂದಿನ ಕಾಲೇಜು ವಿದ್ಯಾರ್ಥಿನಿಲಯಗಳು ಮಂಜೂರಾಗಿವೆ.

ಈ) ಅವಶ್ಯಕತೆ ಮತ್ತು ಹಣದ ಲಭ್ಯತೆಯನ್ನು ಅನುಸರಿಸಿ ಮುಂದಿನ ವರ್ಷದಲ್ಲಿ ಹೊಸ ವಿದ್ಯಾರ್ಥಿನಿಲಯವನ್ನು ಪ್ರಾರಂಭಿಸುವಾಗ ಪರಿಶೀಲಿಸಲಾಗುವುದು.

ರಾಜ್ಯದಲ್ಲಿ ಸಕ್ಕರೆ ಕಾರ್ಖಾನೆಗಳ ಸ್ಥಾಪನೆಗೆ ಕೇಂದ್ರದ ಅನುಮತಿ

533 - ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ಸಕ್ಕರೆ, ಜವಳಿ, ವಿಜ್ಞಾನ ಮತ್ತು ತಂತ್ರಜ್ಞಾನ, ಪರಿಸರ ಮತ್ತು ಜೀವಿಶಾಸ್ತ್ರ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?